## 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕೋರ್ಟ, ಬಸವನ ಬಾಗೇವಾಡಿ.

**ಸಿ.ಸಿ. 612/2016**

| | |
|---|---|
| **ಹೆಸರು** | ಶಿವಾಜಿ ಗೊಳಸಂಗಿ |
| **ತಂದೆಯ ಹೆಸರು** | ವಾಸುದೇವ |
| **ವಯಸ್ಸು** | 51 ವರ್ಷ |
| **ವೃತ್ತಿ** | ಪಿ.ಎಸ್.ಐ ಇಂಡಿ ಗ್ರಾಮೀಣ ಪೋಲಿಸ್ ಠಾಣೆ |
| **ವಿಳಾಸ** | ಇಂಡಿ |

**ಸಾಕ್ಷಿಯನ್ನು ಇಂದು ವಿಡಿಯೋ ಕಾನ್ಪರೆನ್ಸ್ ಮುಖಾಂತರ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು. ದಿನಾಂಕಃ 12.05.2026**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**,

1. ನಾನು ನವೆಂಬರ್-2015 ರಿಂದ ಜನೇವರಿ-2018 ರವರೆಗೆ ನಿಡಗುಂದಿ ಪೊಲೀಸ್ ಠಾಣೆಯಲ್ಲಿ ಎ.ಎಸ್. ಐ ಅಂತ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 30.03.2016 ರಂದು ಮಧ್ಯಾಹ್ನ ನಾನು ಠಾಣಾ ಎಸ್.ಎಚ್.ಒ ಕರ್ತವ್ಯದಲ್ಲಿದ್ದಾಗ ಎಮ್.ಎಲ್.ಸಿ ಬಾಗಲಕೋಟೆ ದಡೆಣ್ಣನವರ ಆಸ್ಪತ್ರೆಯಿಂದ ಬಂದಿರುತ್ತದೆ. ನಂತರ ನಾನು ಈ ವಿಷಯವನ್ನು ನಮ್ಮ ಮೇಲಾಧಿಕಾರಿಗಳಿಗೆ ತಿಳಿಸಿ ನಾನು ಬಾಗಲಕೋಟ ದಡೆಣ್ಣನವರ ಆಸ್ಪತ್ರೆಗೆ ಹೋಗಿ ಚಾಸಾ-1 ರವನ್ನು ವಿಚಾರಣೆ ಮಾಡಿ ಅವರ ಹೇಳಿಕೆ ದೂರನ್ನು ಪಡೆದಿರುತ್ತೇನೆ. ನಂತರ ನಾನು ಠಾಣೆಗೆ ರಾತ್ರಿ 09.15 ಗಂಟೆಗೆ ಬಂದು ಚಾಸಾ-1 ರವರ ಹೇಳಿಕೆ ದೂರಿನ ಆಧಾರದ ಮೇಲೆ ನಮ್ಮ ಠಾಣಾ ಗುನ್ನೆ ನಂಬರ್ 74/2016 ರಂತೆ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೂ ಮತ್ತು ಮೇಲಾಧಿಕಾರಿಗೆ ಕಳುಹಿಸಿರುತ್ತೇನೆ. ನಂತರ ನಾನು ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-10 ರವರಿಗೆ ನೀಡಿರುತ್ತೇನೆ.

3. ಸಾಕ್ಷಿಯು ತಾವು ಸ್ವೀಕರಿಸಿದ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ಅದನ್ನು ನಿಪಿ-1 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಗಳನ್ನು ನಿಪಿ-1(ಬಿ) ಮತ್ತು 1 ಸಿ ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿತರ ಪರ ಮಾನ್ಯ ಶ್ರೀ ಐ ಎ ಪಿ . ವಕೀಲರಿಂದಃ</u>**

1. ಆರೋಪಿತರು ಚಾಸಾ-1 ರವರ ವಿರುದ್ಧ ಮೊದಲೇ ಒಂದು ದೂರನ್ನು ದಾಖಲಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಚಾಸಾ-1 ರವರು ಹೇಳಿಕೆಯ ದೂರನ್ನು ಕೊಟ್ಟಿದ್ದಾರೆ ಎಂದು ಹೇಳುವ ಸಮಯದಲ್ಲಿ ಆರೋಪಿತರು ನಮ್ಮ ಠಾಣೆಯಲ್ಲಿದ್ದರು ಎಂದರೆ ಸರಿಯಲ್ಲ. ಆರೋಪಿತರ ವಿರುದ್ಧ ಯಾವುದೇ ಆರೋಪಗಳು ನನ್ನ ತನಿಖಾವಧಿಯಲ್ಲಿ ಕಂಡು ಬರದೇ ಇದ್ದರೂ ಕೂಡ ಚಾಸಾ-1 ರವರಿಗೆ ಸಹಾಯ ಮಾಡಲು ಆರೋಪಿತರ ವಿರುದ್ಧ ಸುಳ್ಳು ಪ್ರ.ವ.ವರದಿಯನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u> ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ವಿಡಿಯೋ ಕಾನ್ಫರೇನ್ಸ ಮುಖಾಂತರ ಬೆಳಿಗ್ಗೆ 09.45 ರಿಂದ 10.00 ಗಂಟೆಯವರೆಗೆ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸರಿ ಇದೆ.**

**1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ.**
**ಬಸವನ ಬಾಗೇವಾಡಿ.**